# ಕರ್ನಾಟಕ ಸರ್ಕಾರ

ಸಂಖ್ಯೆ: ಅಪಜೀ 29 ಎಫ್ಎಪಿ 2011

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 19-03-2011

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ
(...) ಬೆಂಗಳೂರು-01
2 MAR 2011

## ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯದಲ್ಲಿ ನೀಲಗಿರಿ ಮರಗಳನ್ನು ಬೆಳೆಯಲು ಮಾರ್ಗಸೂಚಿ ಮತ್ತು ನಿರ್ಬಂಧಗಳ ಬಗ್ಗೆ.

*****

ಕರ್ನಾಟಕ ರಾಜ್ಯದಲ್ಲಿ ನೀಲಗಿರಿ ಮರಗಳನ್ನು ಈ ಹಿಂದೆ ವ್ಯಾಪಕವಾಗಿ ಬೆಳೆಯಲಾಗುತ್ತಿದ್ದು, ನೀಲಗಿರಿ ಮರಗಳನ್ನು ಬೆಳೆಸುವುದರಿಂದ ಉಂಟಾಗುವ ಸಾಧಕ-ಬಾಧಕಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ನೀಲಗಿರಿ ಮರಗಳನ್ನು ಬೆಳೆಸುವ ಬಗ್ಗೆ ಕೆಲವು ನಿರ್ದಿಷ್ಟ ನಿರ್ದೇಶನಗಳನ್ನು ನೀಡುವ ಅಗತ್ಯತೆಯನ್ನು ಮನಗಂಡು, ರಾಜ್ಯದಲ್ಲಿ ನೀಲಗಿರಿ ಗಿಡಗಳನ್ನು ಬೆಳೆಸುವ ವಿಷಯಕ್ಕೆ ಸಂಬಂಧಿಸಿದಂತೆ ಕೆಲವೊಂದು ಮಾರ್ಗಸೂಚಿ ಮತ್ತು ನಿರ್ಬಂಧನೆಗಳನ್ನು ನೀಡಿದ್ದು, ಇವುಗಳನ್ನು ಇಲಾಖೆಯ ಎಲ್ಲಾ ಅಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸುವುದು.

1. ನೀಲಗಿರಿ ಗಿಡಗಳನ್ನು ಕೃತಕ ನೆಡುತೋಪು ಮಾದರಿ (Artificial Regeneration Model) ಯಲ್ಲಿ ಕೆಳಕಂಡ ಪ್ರದೇಶಗಳಲ್ಲಿ ಮಾತ್ರ ಬೆಳೆಸುವುದು.

    - ಬಯಲು ಸೀಮೆಯಲ್ಲಿರುವ ಮಧ್ಯಮ ಫಲವತ್ತತೆ ಇರುವ ಪ್ರದೇಶಗಳು.
    - ಗಡಿನಾಡು (Transitional Zone) ಪ್ರದೇಶದ ಕಡಿಮೆ ಫಲವತ್ತತೆ ಇರುವ ಬೆಟ್ಟ ಪ್ರದೇಶಗಳು.

    ಇಂಥ ಪ್ರದೇಶಗಳಲ್ಲಿ ನೀಲಗಿರಿ ಮರಗಳನ್ನು ಭೂ ಫಲವತ್ತತೆ ಹೆಚ್ಚಿಸುವ ಗ್ಲಿರಿಸೀಡಿಯಾ (ಗೊಬ್ಬರ ಗಿಡ) ಮತ್ತು ಸ್ಥಳೀಯ ಸಸ್ಯಗಳಾದ ಕಮರಾ, ರಾಮಫಲ, ಕಾಸೋಡ (Cassia siamia), ಹಲಸು, ಹೊಂಗೆ, ಬೇವು, ಗೋಡಂಬಿ, ಹಾಲೆ, ತಪಸಿ, ಉದೇವು, ಮಾವು, ಆಲ, ಅರಳಿ, ಹುಣಸೆ, ಬಿಲ್ವಪತ್ರೆ, ಬ್ಲಿನ್ನಿ, ಅಂಟುವಾಳ, ಹೆಬ್ಬೇವು, ನೇರಳೆ, ಸೋಮಿ ಇವುಗಳೊಡನೆ ಮಿಶ್ರ ನೆಡುತೋಪಾಗಿ ಬೆಳೆಸುವುದು.

2. ಜಂಟಿ ಅರಣ್ಯ ಯೋಜನೆಗೆ ಒಳಪಟ್ಟ ಪ್ರದೇಶಗಳಲ್ಲಿ ಸ್ಥಳೀಯ ಬೇಡಿಕೆಗಳಾದ ಸೌದೆ, ಎಲೆ, ಸಣ್ಣ ಮರಮುಟ್ಟುಗಳನ್ನು ಪೂರೈಸುವ ಸಲುವಾಗಿ ಕನಿಷ್ಠ ಅಗತ್ಯತೆಗೆ ಸೀಮಿತಗೊಳಿಸಿ ನೀಲಗಿರಿ ಗಿಡಗಳನ್ನು ಬೆಳೆಸುವುದು.

3. ಈ ಪ್ರದೇಶಗಳನ್ನು ಹೊರತುಪಡಿಸಿ ಮಲೆನಾಡು ಮತ್ತು ಅರೆ ಮಲೆನಾಡು ಪ್ರದೇಶಗಳ ಸಸ್ಯಕ್ಷೇತ್ರಗಳಲ್ಲಿ ನೀಲಗಿರಿ ಸಸಿಗಳನ್ನು ಬೆಳೆಸುವುದನ್ನು ಮತ್ತು ನೀಲಗಿರಿ ಮರಗಳನ್ನು ಯಾವುದೇ ಪ್ರಕಾರದ ಅರಣ್ಯ ಭೂಮಿ / ಸರ್ಕಾರಿ ಭೂಮಿಗಳಲ್ಲಿ, ಅರಣ್ಯ ಇಲಾಖೆಯ ವತಿಯಿಂದಾಗಲಿ ಅಥವಾ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ನಿಯಂತ್ರಣದಲ್ಲಿರುವ ಸರ್ಕಾರಿ ಸ್ವಾಮ್ಯದ ನಿಗಮಗಳಿಂದಾಗಲೀ ಬೆಳೆಸುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲಾಗಿದೆ. ಈ ಆದೇಶವನ್ನು 3 ತಿಂಗಳ ಒಳಗಾಗಿ ಜಾರಿಗೊಳಿಸುವ ಜವಾಬ್ದಾರಿಯು ಸಂಬಂಧಪಟ್ಟ ಪ್ರಾದೇಶಿಕ ಉಪ ಅರಣ್ಯ ಸಂರಕ್ಷಣಾಧಿಕಾರಿಗಳದ್ದಾಗಿರುತ್ತದೆ.

APCCF (Dev)

Section

Pl. inform to all the APCCFs / CCFs / CFs / DCFs for further necessary action.
20/3

4. ಕ್ರಮ ಸಂಖ್ಯೆ: 1 ಮತ್ತು 2 ರಲ್ಲಿ ಸೂಚಿಸಿರುವ ಪ್ರದೇಶಗಳನ್ನು ಹೊರತುಪಡಿಸಿ-

ಅ) ರಾಜ್ಯದ ಯಾವುದೇ ಪ್ರದೇಶದಲ್ಲಿ ಸರ್ಕಾರಿ / ಅರಣ್ಯ ಜಮೀನಿನಲ್ಲಿ ಅರಣ್ಯ ಇಲಾಖಾವತಿಯಿಂದ ಹಾಗೂ

ಆ) ಮಲೆನಾಡು ಮತ್ತು ಅರೆ ಮಲೆನಾಡು ಪ್ರದೇಶಗಳಲ್ಲಿ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಸ್ವಾಮ್ಯದ ನಿಗಮಗಳಿಂದ ನೀಲಗಿರಿ ಬೆಳೆಯುವುದನ್ನು ನಿರ್ಭಂದಿಸಲಾಗಿದೆ.

ಈ ನಿರ್ದೇಶನಗಳನ್ನು ಎಲ್ಲಾ ಅನುಷ್ಠಾನಾಧಿಕಾರಿಗಳು ತಪ್ಪದೇ ಜಾರಿಗೆ ತರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶ ಅನುಸಾರ
ಮತ್ತು ಅವರ ಹೆಸರಿನಲ್ಲಿ

(ಸಹಿ) 1/3/2011

(ಎಸ್.ಪಿ. ಪಾಟೀಲ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ),
ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

ಇವರಿಗೆ:

1) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ. ಅರಣ್ಯ ಭವನ. ಮಲ್ಲೇಶ್ವರಂ. ಬೆಂಗಳೂರು.
2) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
3) ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಾದೇಶಿಕ ಹಾಗೂ ಸಾಮಾಜಿಕ ಅರಣ್ಯ) / ವಲಯ ಅರಣ್ಯಾಧಿಕಾರಿಗಳು (ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಮುಖಾಂತರ)
4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ, ವನವಿಕಾಸ, ಮಲ್ಲೇಶ್ವರಂ, ಬೆಂಗಳೂರು-560 003.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕ ನಿಗಮ, ವನವಿಕಾಸ, ಮಲ್ಲೇಶ್ವರಂ, ಬೆಂಗಳೂರು-560 003.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗೇರು ಅಭಿವೃದ್ಧಿ ನಿಗಮ, ಮಂಗಳೂರು.
7) ಮಾನ್ಯ ಅರಣ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ(ಅರಣ್ಯ)/ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು/ ಆಪ್ತ ಸಹಾಯಕರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
9) ಶಾಖಾ ರಕ್ಷಾ ಕಡತ.

ಕಚೇರಿ
ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅಭಿವೃದ್ಧಿ), ಬೆಂಗಳೂರು.

ಸಂಖ್ಯೆ ಬಿ1. ಬಿಂಮುಡಿ. ಸಿಆರ್.13/2010-11. ದಿನಾಂಕ 24-03-2011

ಪ್ರತಿಯನ್ನು ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಎಲ್ಲಾ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ.

ಪ್ರತಿಯನ್ನು ಎಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

(ಸಹಿ)
ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ

**ಕರ್ನಾಟಕ ಸರ್ಕಾರ**

ಸಂಖ್ಯೆ: ಅಪಜೀ 31 ಎಫ್‌ಎಪಿ 2011

ಕರ್ನಾಟಕ ಸರ್ಕಾರದ ಸಚಿವಾಲಯ.
ಬಹುಮಹಡಿಗಳ ಕಟ್ಟಡ,
ಬೆಂಗಳೂರು. ದಿನಾಂಕ: 18-05-2011

**ಸುತ್ತೋಲೆ**

ವಿಷಯ: ಕರ್ನಾಟಕ ರಾಜ್ಯದಲ್ಲಿ ಅಕೇಶಿಯ ಮರಗಳನ್ನು ಬೆಳೆಯಲು ಮಾರ್ಗಸೂಚಿ ಮತ್ತು ನಿರ್ಬಂಧನೆಗಳ ಬಗ್ಗೆ.

*****

ಕರ್ನಾಟಕ ರಾಜ್ಯದಲ್ಲಿ ಅಕೇಶಿಯ (Acacia auriculiformis) ಮರಗಳನ್ನು ಬೆಳೆಸುವುದರಿಂದ ಉಂಟಾಗುವ ಸಾಧಕ-ಬಾಧಕಗಳನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಅಕೇಶಿಯಾ ಮರಗಳನ್ನು ಬೆಳೆಸುವ ಹಾಗೂ ನಿಷೇಧಿಸುವ ಬಗ್ಗೆ ಕೆಲವು ನಿರ್ಧಿಷ್ಟ ನಿರ್ದೇಶನಗಳನ್ನು ನೀಡುವ ಅಗತ್ಯತೆಯನ್ನು ಮನಗಂಡು, ಈ ಕೆಳಕಂಡ ಮಾರ್ಗಸೂಚಿ ಮತ್ತು ನಿರ್ಬಂಧನೆಗಳನ್ನು ನೀಡಲಾಗಿದೆ. ಇವುಗಳನ್ನು ಇಲಾಖೆಯ ಎಲ್ಲಾ ಅಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

I. ಅಕೇಶಿಯಾ ಮರಗಳನ್ನು ಈ ಕೆಳಕಂಡ ಪ್ರದೇಶಗಳಲ್ಲಿ ಮಾತ್ರ ಬೆಳೆಸುವುದು.

1. ಬಂಜರು ಲ್ಯಾಟ್ರೈಟ್ ಪ್ರದೇಶಗಳಲ್ಲಿ (Barren Lateritic areas) ಅಕೇಶಿಯಾ ಗಿಡಗಳನ್ನು ಬೆಳೆಸುವುದು.
2. ಶೇ.25 ಕ್ಕಿಂತ ಕಡಿಮೆ ಅರಣ್ಯ ಕವಚ ಇರುವ ಪ್ರದೇಶಗಳಲ್ಲಿ ಎಲ್ಲಿ ಸ್ಥಳೀಯ ಮರಗಳ ನೈಸರ್ಗಿಕ ಪುನರುತ್ಪತ್ತಿ (Natural Regeneration) ಕೊರತೆ ಇದೆಯೋ ಅಂಥಹ ಪ್ರದೇಶಗಳಲ್ಲಿ ಅಕೇಶಿಯಾ ಗಿಡಗಳನ್ನು ಬೆಳೆಸುವುದು.
3. ಒತ್ತುವರಿ ತೆರವುಗೊಳಿಸಿದ ಪ್ರದೇಶಗಳಲ್ಲಿ ಹಾಗೂ ಒತ್ತುವರಿ ತಡೆಗಟ್ಟಲು ಶೀಘ್ರವಾಗಿ ಮರಗಳನ್ನು ಬೆಳೆಸುವ ದೃಷ್ಟಿಯಿಂದ ಅಕೇಶಿಯಾ ನೆಡುತೋಪುಗಳನ್ನು ಬೆಳೆಸಬಹುದಾಗಿರುತ್ತದೆ.
4. ಜಂಟಿ ಅರಣ್ಯ ಯೋಜನೆ ಪ್ರದೇಶಗಳಲ್ಲಿ ಗ್ರಾಮ ಅರಣ್ಯ ಸಮಿತಿಯ ಅನುಮೋದಿತ ನಿರ್ವಹಣಾ ಯೋಜನೆಯಂತೆ (Management Plan) ಅಕೇಶಿಯಾ ಮರಗಳನ್ನು ಬೆಳೆಸುವುದು.

II. ಸಮುದ್ರದ ಅಲೆಗಳಿಂದುಂಟಾಗುವ ಭೂ ಕೊರತವನ್ನು ತಡೆಗಟ್ಟುವ ಪ್ರದೇಶಗಳು, ಅನ್ಯ ತರಹದ ಮರಗಿಡಗಳು ಬೆಳೆಯದೇ ಇರುವ ಬೋಳು ಬೆಟ್ಟ ಗುಡ್ಡ ಪ್ರದೇಶ, ಕಲ್ಲು ಮಂಟಿ ಭಾಗಗಳನ್ನು ಹೊರತುಪಡಿಸಿ, ಉಳಿದಂತೆ ಮಲೆನಾಡು ಮತ್ತು ಅರೆಮಲೆನಾಡು ಪ್ರದೇಶಗಳಲ್ಲಿ ಹಾಗೂ ಬಯಲು ಸೀಮೆ ವ್ಯಾಪ್ತಿಯ ಪ್ರದೇಶಗಳಲ್ಲಿ ಅಕೇಶಿಯಾ ಮರಗಳನ್ನು ಬೆಳೆಯುವುದನ್ನು ನಿಷೇಧಿಸಲಾಗಿದೆ.

(ಸುಬ್ರಾಯ ಕಾಮತ್)
ಸರ್ಕಾರದ ಉಪ ಕಾರ್ಯದರ್ಶಿ,
ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

ಇವರಿಗೆ:

1) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
2) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.

...2...

3) ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ಅರಣ್ಯ ಸಂರಕ್ಷಣಾಧಿಕಾರಿಗಳು (ಪ್ರಾದೇಶಿಕ ಹಾಗೂ ಸಾಮಾಜಿಕ ಅರಣ್ಯ) / ವಲಯ ಅರಣ್ಯಾಧಿಕಾರಿಗಳು (ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಮುಖಾಂತರ)
4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ, ವನವಿಕಾಸ, ಮಲ್ಲೇಶ್ವರಂ, ಬೆಂಗಳೂರು-560 003.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕ ನಿಗಮ, ವನವಿಕಾಸ, ಮಲ್ಲೇಶ್ವರಂ, ಬೆಂಗಳೂರು-560 003.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗೇರು ಅಭಿವೃದ್ಧಿ ನಿಗಮ, ಮಂಗಳೂರು.
7) ಮಾನ್ಯ ಅರಣ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ(ಅರಣ್ಯ)/ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು/ ಆಪ್ತ ಸಹಾಯಕರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
9) ಶಾಖಾ ರಕ್ಷ ಕಡತ.